ಕರ್ನಾಟಕ ಸರ್ಕಾರ

ತಾಂತ್ರಿಕ ಶಿಕ್ಷಣ ಇಲಾಖೆ

DTE-ADMI0ACM2/ 08 /2024

ಆಯುಕ್ತರ ಕಛೇರಿ,
ತಾಂತ್ರಿಕ ಶಿಕ್ಷಣ ಭವನ,
ಅರಮನೆ ರಸ್ತೆ, ಬೆಂಗಳೂರು-560 001.
ದಿನಾಂಕ:19.02.2024.

-:: ಸುತ್ತೋಲೆ ::-

ವಿಷಯ: **2024-25ನೇ ಶೈಕ್ಷಣಿಕ ಸಾಲಿನಲ್ಲಿ ಡಿಪ್ಲೋಮಾ ಪ್ರವೇಶಾತಿಯು ಪೂರ್ಣ ಪ್ರಮಾಣದಲ್ಲಿ ಭರ್ತಿ ಆಗಲು ಕ್ರಮ ವಹಿಸುವ ಬಗ್ಗೆ.**

************

2024-25ನೇ ಶೈಕ್ಷಣಿಕ ಸಾಲಿನ ಪ್ರಥಮ ಡಿಪ್ಲೋಮಾ ಪ್ರವೇಶಾತಿ ಸಂಬಂಧ ಆಯಾ ಸಂಸ್ಥೆಗಳ ಸ್ಥಳೀಯ ಪ್ರದೇಶದ ಎಸ್.ಎಸ್.ಎಲ್.ಸಿ ಯಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳಿಗೆ ಡಿಪ್ಲೋಮಾ ಕೋರ್ಸುಗಳ ಬಗ್ಗೆ ಹಾಗೂ ಭವಿಷ್ಯದಲ್ಲಿ ಇದರಿಂದ ವಿದ್ಯಾರ್ಥಿಗಳಿಗೆ ಆಗುವ ಲಾಭಗಳ ಬಗ್ಗೆ ಹೆಚ್ಚಿನ ಪ್ರಮಾಣದ ಪ್ರಚಾರವನ್ನು ನೀಡುವುದರ ಮುಖಾಂತರ ಡಿಪ್ಲೋಮಾ ಪ್ರವೇಶಾತಿಯನ್ನು ನಿರೀಕ್ಷಿತ ಮಟ್ಟಕ್ಕೆ ಕೊಂಡೊಯ್ಯುವ ನಿಟ್ಟಿನಲ್ಲಿ ಅಗತ್ಯ ಕ್ರಮಕೈಗೊಳ್ಳಲು ಸೂಚಿಸಿದೆ.

ಆದ್ದರಿಂದ, ರಾಜ್ಯದ ಎಲ್ಲಾ ಸರ್ಕಾರಿ ಪಾಲಿಟೆಕ್ನಿಕ್ ಸಂಸ್ಥೆಗಳ ಪ್ರಾಂಶುಪಾಲರು ತಮ್ಮ ಉಪನ್ಯಾಸಕರ ತಂಡದೊಂದಿಗೆ ಸಂಸ್ಥೆಯ ಸುತ್ತಮುತ್ತಲಿನ ಪ್ರೌಢಶಾಲೆಗಳಿಗೆ ಭೇಟಿ ನೀಡಿ ಎಸ್.ಎಸ್.ಎಲ್.ಸಿ ಅಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಡಿಪ್ಲೋಮಾ ಕೋರ್ಸುಗಳ ಬಗ್ಗೆ ಹಾಗೂ ಡಿಪ್ಲೋಮಾ ಶಿಕ್ಷಣ ಹೊಂದಲು ಸಾಮಾನ್ಯ ವರ್ಗ, ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳ ವಿದ್ಯಾರ್ಥಿ/ವಿದ್ಯಾರ್ಥಿನಿಯರುಗಳಿಗೆ ಡಿಪ್ಲೋಮಾ ಪ್ರವೇಶದಲ್ಲಿ ಇರುವ ಶುಲ್ಕ ವಿನಾಯಿತಿ, ವಿದ್ಯಾರ್ಥಿನಿಲಯ ಸವಲತ್ತುಗಳ ಬಗ್ಗೆ ಹಾಗೂ ಡಿಪ್ಲೋಮಾ ನಂತರದ ಶೈಕ್ಷಣಿಕ, ಉದ್ಯೋಗ ಅವಕಾಶಗಳ ಬಗ್ಗೆ ತಿಳುವಳಿಕೆ ನೀಡಿ ವಿದ್ಯಾರ್ಥಿಗಳು ಡಿಪ್ಲೋಮಾ ಪ್ರವೇಶ ಹೊಂದುವಂತೆ ಸ್ಥಳೀಯ ಮಟ್ಟದಲ್ಲಿ ಪರಿಣಾಮಕಾರಿ ಪ್ರಚಾರದೊಂದಿಗೆ ತೆಗೆದುಕೊಳ್ಳುತ್ತಿರುವ ಕ್ರಮದ ಬಗ್ಗೆ ಹಾಗೂ ಪ್ರವೇಶದ ಅಂಕಿ-ಅಂಶಗಳೊಂದಿಗೆ ಪ್ರತಿದಿನ ವರದಿಯನ್ನು ಆಯುಕ್ತಾಲಯದ ಇಮೇಲ್ **admissiontaskforce2020@gmail.com** ವಿಳಾಸಕ್ಕೆ ಕಳುಹಿಸಲು ಸೂಚಿಸಿದೆ.

*"ಟಿಪ್ಪಣಿ ಮಾನ್ಯ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ"*

ನಿರ್ದೇಶಕರು
ತಾಂತ್ರಿಕ ಶಿಕ್ಷಣ ಇಲಾಖೆ
ಬೆಂಗಳೂರು

ಇವರಿಗೆ,

ರಾಜ್ಯದ ಎಲ್ಲಾ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜುಗಳ ಪ್ರಾಂಶುಪಾಲರಿಗೆ - ಸೂಕ್ತ ಕ್ರಮಕ್ಕಾಗಿ ಹಾಗೂ ಅನುಸರಣೆಗಾಗಿ.

<u>ಪ್ರತಿ:-</u>

1. ಜಂಟಿ ನಿರ್ದೇಶಕರು(ಆಡಳಿತ), ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು.
2. ಜಂಟಿ ನಿರ್ದೇಶಕರು(ಪರೀಕ್ಷೆ), ತಾಂತ್ರಿಕ ಪರೀಕ್ಷಾ ಮಂಡಳಿ, ಬೆಂಗಳೂರು.
3. ನಿರ್ದೇಶಕರ ಆಪ್ತಶಾಖೆಗೆ.
4. ಸಾರ್ವಜನಿಕ ಸಂಪರ್ಕಾಧಿಕಾರಿಗಳು, ತಾಂ.ಶಿ.ನಿ, ಬೆಂಗಳೂರು.
5. ಸಂಯೋಜನಾಧಿಕಾರಿಗಳು, ಇ-ಆಡಳಿತ, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ. ಬೆಂಗಳೂರು - ಸದರಿ ಸುತ್ತೋಲೆಯನ್ನು ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಚುರಪಡಿಸುವುದು.
6. ಕಛೇರಿ ಪ್ರತಿ.